ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರು(ಆಡಳಿತ) ರವರ ಕಾರ್ಯಾಲಯ ಕಲಬುರಗಿ

ದಿನಾಂಕ:18-06-2021

ಸಂಖ್ಯೆ:ಸಿ1(1)/ಆಡಳಿತ/ಪ್ರಾಶಾಮುಶಿ/ಬಡ್ತಿ/119/2020-21

**ಅಧಿಸೂಚನೆ**

ವಿಷಯ:-ದಿನಾಂಕ:01-01-2021 ರಲ್ಲಿದ್ದಂತೆ ಕಲಬುರಗಿ ಜಿಲ್ಲೆಯ ವ್ಯಾಪ್ತಿಯ ಸರಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರ ಹುದ್ದೆಯಿಂದ ಹಿರಿಯ ಮುಖ್ಯ ಶಿಕ್ಷಕರ ಹುದ್ದೆಗೆ ಬಡ್ತಿ ನಿಡುವ ಸಂಬಂಧ ತಯ್ಯಾರಿಸಿದ 1:3ರ ತಾತ್ಕಾಲಿಕ ಅರ್ಹತಾ ಪಟ್ಟಿ ಪ್ರಕಟಿಸುವ ಬಗ್ಗೆ.

ಉಲ್ಲೇಖ:-1)ಕರ್ನಾಟಕ ಸರ್ಕಾರಿ ನೌಕರರ(ಜೇಷ್ಠತಾ)ನಿಯಮಗಳು 1957 ನಿಯಮ(5) ರಂತೆ.
2)ಸರ್ಕಾರಿ ಪತ್ರ ಸಂಖ್ಯೆ:ಇಡಿ 202 ಎಸ್‌ಎಲ್‌ಬಿ 2014 ದಿನಾಂಕ:20-05-2014.
3)ಸರ್ಕಾರಿ ಪತ್ರ ಸಂಖ್ಯೆ:ಇಡಿ 152 ಎಲ್‌ಬಿಪಿ 2014 ದಿನಾಂಕ:20-05-2014.
4)ಸರ್ಕಾರದ ಪತ್ರ ಸಂಖ್ಯೆ:ಡಿ.ಪಿ.ಎ.ಆರ್186ಎಸ್.ಆರ್.ಎಸ್2018 ಬೆಂಗಳೂರು ದಿ:15-05-2019.
5)ಈ ಕಛೇರಿಯ ಅಧಿಸೂಚನೆ ದಿ:08-02-2021,18-03-2021,26-03-2021,05-04-2021

- * * * * * -

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:01-01-2021 ರಲ್ಲಿದ್ದಂತೆ ಕಲಬುರಗಿ ಜಿಲ್ಲೆಯ ವ್ಯಾಪ್ತಿಯ ಸರಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರ ಹುದ್ದೆಯಿಂದ ಹಿರಿಯ ಮುಖ್ಯ ಶಿಕ್ಷಕರ ಹುದ್ದೆಗೆ ಬಡ್ತಿ ನೀಡುವ ಸಂಬಂಧ ತಯ್ಯಾರಿಸಿದ 1:3ರ ತಾತ್ಕಾಲಿಕ ಅರ್ಹತಾ ಪಟ್ಟಿಯನ್ನು ದಿನಾಂಕ:18-06-2021 ರಂದು ಪ್ರಕಟಿಸಲಾಗಿದೆ. ಸದರಿ ಪಟ್ಟಿಯನ್ನು ಈ ಕಾರ್ಯಾಲಯದ ವೆಬ್‌ಸೈಟ್ (www.ddpikalaburgi.in)ದಲ್ಲಿ ಗಮನಿಸಬಹುದು. ಪ್ರಕಟಿಸಲಾದ ತಾತ್ಕಾಲಿಕ ಅರ್ಹತಾ ಪಟ್ಟಿಗೆ ಸಂಬಂಧಿಸಿದಂತೆ ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ:25-06-2021ರ ಒಳಗಾಗಿ ನೇರವಾಗಿ ಈ ಕಛೇರಿಗೆ ಸೂಕ್ತ ದಾಖಲೆಗಳೊಂದಿಗೆ ಸಲ್ಲಿಸತಕ್ಕದ್ದು. ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

ತಾತ್ಕಾಲಿಕ ಅರ್ಹತಾ ಪಟ್ಟಿಯಲ್ಲಿರುವ ಮುಖ್ಯ ಶಿಕ್ಷಕರು 5 ವರ್ಷಗಳ ಗೌಪ್ಯ ವರದಿಯನ್ನು ದಿನಾಂಕ:25-06-2021ರ ಒಳಗಾಗಿ ಈ ಕಛೇರಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಸಲ್ಲಿಸತಕ್ಕದ್ದು ಅಥವಾ ಬಡ್ತಿ ನಿರಾರಣೆ ಕುರಿತು ತಮ್ಮ ಅಭಿಮತ ಪತ್ರವನ್ನು ನೀಡತಕ್ಕದ್ದು. ನಿಗದಿತ ಅವಧಿಯೊಳಗೆ ಗೌಪ್ಯ ವರದಿ ಸಲ್ಲಿಸದಿದ್ದಲ್ಲಿ ಬಡ್ತಿ ನಿರಾಕರಿಸಿರುತ್ತಾರೆ ಎಂದು ಪರಿಗಣಿಸಲಾಗುವುದು.

ಉಪ ನಿರ್ದೇಶಕರು(ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ
ಕಲಬುರಗಿ

ಗೆ,

1) ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
2) ಈ ಕಛೇರಿಯ ಇ-ಗೌರ್ನರ್ಸಕ್ಕೆ ಕೊಡುತ್ತಾ ಈ ಕಾರ್ಯಾಲಯದಲ್ಲಿ ವೆಬ್‌ಸೈಟ್‌ದಲ್ಲಿ ಪ್ರಕಟಿಸಲು ತಿಳಿಸಿದೆ.

ಪ್ರತಿಯನ್ನು:-

1) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆಯ ಸಚಿವಾಲಯ ಬಹುಮಹಡಿಗಳ ಕಟ್ಟಡ ಬೆಂಗಳೂರು ಇವರಿಗೆ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
2) ಮಾನ್ಯ ಆಯುಕ್ತರು ಬೆಂಗಳೂರು ಹಾಗೂ ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
3) ಮಾನ್ಯ ನಿರ್ದೇಶಕರು ಅಪರ ಆಯುಕ್ತರ ಕಛೇರಿ ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
4) ಮಾನ್ಯ ಸಹ ನಿರ್ದೇಶಕರು(ಆಡಳಿತ) ಅಪರ ಆಯುಕ್ತರ ಕಛೇರಿ ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.